# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 956

ಸದಸ್ಯರ ಹೆಸರು : ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 24-02-2022.

ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

| ಕ್ರ.ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ. | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಸಿಬ್ಬಂದಿಗಳಿಗೆ ಬಡ್ತಿ ನೀಡಲು ಅನುಕೂಲವಾಗುವಂತೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಇದುವರೆವಿಗೂ ಪರಿಷ್ಕರಿಸದಿರಲು ಕಾರಣಗಳೇನು; (ವಿವರ ನೀಡುವುದು) | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಎಂಡಬ್ಲ್ಯೂಡಿ 154 ಎಂಡಿಎಸ್ 2010, ದಿನಾಂಕ:15.03.2011ರಲ್ಲಿ ರಚಿಸಲಾಗಿರುತ್ತದೆ.<br><br>2011ರ ನಂತರ ಹೊಸದಾಗಿ ಸೃಜಿಸಿ ಮಂಜೂರಾಗಿರುವ ಸುಮಾರು 50 ವಿವಿಧ ವೃಂದಗಳ ಹುದ್ದೆಗಳನ್ನು ಸೇರಿಸಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸುವ ಪ್ರಸ್ತಾವನೆಯು ಪರಿಶೀಲನಾ ಹಂತದಲ್ಲಿರುತ್ತದೆ. |
| ಆ. | ಯಾವ ಕಾಲಮಿತಿಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಣೆ ಮಾಡಲಾಗುತ್ತದೆ; | ಪ್ರಸ್ತುತ ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆ ಪ್ರಸ್ತಾವನೆಯು ಪರಿಶೀಲನಾ ಹಂತದಲ್ಲಿರುವುದರಿಂದ ಅನುಮೋದನೆ ಪಡೆದ ಕೂಡಲೇ ಪರಿಷ್ಕೃತ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪ್ರಕಟಿಸಲಾಗುವುದು. |
| ಇ. | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಬೋಧಕ ಸಿಬ್ಬಂದಿಗೆ ಕುಮಾರ್‌ನಾಯಕ್ ವರದಿಯನ್ವಯ ಒಂದು ವೇತನ ಬಡ್ತಿ ನೀಡಲು ಶಿಫಾರಸ್ಸು ಮಾಡಲಾಗಿದೆಯೇ; | ಶಿಕ್ಷಣ ಇಲಾಖೆ (ಪ್ರೌಢ ಶಿಕ್ಷಣ) ದಿ:15.04.2016ರ ಆದೇಶದ ಅನುಸಾರ ಜೂನ್-2016 ರಂದು ಕಾರ್ಯನಿರ್ವಹಿಸುತ್ತಿದ್ದ ಶಿಕ್ಷಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಿದ್ದು, ಈ ಇಲಾಖೆಯಿಂದ ಅದೇ ಅವಧಿಯಲ್ಲಿ ನೇಮಕಗೊಂಡಿರುವುದರಿಂದ ಈ ಬಗ್ಗೆ ಪರಿಶೀಲಿಸಿ ಆದಷ್ಟು ಬೇಗ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು. |
| ಈ. | ಕುಮಾರ್‌ನಾಯಕ್ ವರದಿಯನ್ವಯ ಸದರಿ ಬೋಧಕ ಸಿಬ್ಬಂದಿಗೆ ಯಾವ ಕಾಲಮಿತಿಯಲ್ಲಿ ವೇತನ ಬಡ್ತಿ ನೀಡಲಾಗುವುದು? (ವಿವರ ನೀಡುವುದು) | ಈ ಬಗ್ಗೆ ಪರಿಶೀಲಿಸಿ ಆದಷ್ಟು ಬೇಗ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: **MWD 63 LMQ 2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ